# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 523
ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಗೋವಿಂದರಾಜ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 05.02.2021
ಉತ್ತರಿಸುವವರು : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ ವಿಕಲಚೇತನರಿಗೆ ಜಾರಿಗೊಳಿಸಿರುವ ಯೋಜನೆಗಳು ಯಾವುವು; (ಮಾಹಿತಿ ನೀಡುವುದು) | ವಿಕಲಚೇತನರ ಶ್ರೇಯೋಬಿವೃದ್ಧಿಗೆ ಸರ್ಕಾರ ಜಾರಿಗೊಳಿಸಿರುವ ಯೋಜನೆಗಳ ವಿವರ ಅನುಬಂಧ -1ರಲ್ಲಿ ಲಗತ್ತಿಸಿದೆ. |
| ಆ | ಕಳೆದ 3 ವರ್ಷಗಳಲ್ಲಿ ಕೋಲಾರ ಜಿಲ್ಲೆಗೆ ವಿಕಲಚೇತನರ ಅಭಿವೃದ್ಧಿಗಾಗಿ ಸರ್ಕಾರ ನಿಗದಿಪಡಿಸಿ ಬಿಡುಗಡೆ ಮಾಡಿದ ವೆಚ್ಚವೆಷ್ಟು; (ಯೋಜನೆಗಳವಾರು ವಿವರ ನೀಡುವುದು) | ಕೋಲಾರ ಜಿಲ್ಲೆಯ 2017-18 ಹಾಗೂ 2018-19 ಮತ್ತು 2019-20ನೇ ಸಾಲಿನ ವಾರ್ಷಿಕ ಅನುದಾನದ ಬಿಡುಗಡೆ ಮತ್ತು ವೆಚ್ಚದ ವಿವರ ಅನುಬಂಧ-2ರಲ್ಲಿ ಲಗತ್ತಿಸಿದೆ. |
| ಇ | ಕಳೆದ 3 ವರ್ಷಗಳಲ್ಲಿ ಕೋಲಾರ ಜಿಲ್ಲೆಯಲ್ಲಿ ವಿಕಲಚೇತನರಿಂದ ದ್ವಿಚಕ್ರ ವಾಹನಗಳಿಗಾಗಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು) | (see table below) |

| ಕ್ರ.ಸಂ. | ತಾಲ್ಲೂಕು | ಕಳೆದ ಮೂರು ವರ್ಷದಲ್ಲಿ ಸಲ್ಲಿಕೆಯಾದ ಅರ್ಜಿಗಳು |
|---|---|---|
| 1 | ಬಂಗಾರಪೇಟೆ | 28 |
| 2 | ಕೆ.ಜಿ.ಎಫ್ | 19 |
| 3 | ಕೋಲಾರ | 84 |
| 4 | ಮಾಲೂರು | 35 |
| 5 | ಮುಳಬಾಗಿಲು | 56 |
| 6 | ಶ್ರೀನಿವಾಸಪುರ | 76 |
| | ಒಟ್ಟು | 298 |

| ಕ್ರ.ಸಂ | ಪ್ರಶ್ನೆ |
|---|---|
| ಈ | ಇವುಗಳಲ್ಲಿ ಇದುವರೆವಿಗೂ ವಿಲೇವಾರಿಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ಮತ್ತು ವಿಲೇವಾರಿಯಾಗದೆ ಉಳಿದಿರುವ ಅರ್ಜಿಗಳ ಸಂಖ್ಯೆ ಎಷ್ಟು; ವಿಲೇವಾರಿಯಾಗದೆ ಉಳಿದಿರಲು ಕಾರಣಗಳೇನು; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು) |

| ಕ್ರ. ಸಂ. | ತಾಲ್ಲೂಕು | ವಿಲೇವಾರಿ ಯಾಗಿರುವ ಅರ್ಜಿಗಳ ಸಂಖ್ಯೆ | ವಿಲೇವಾರಿ ಯಾಗದೇ ಇರುವ ಅರ್ಜಿಗಳ ಸಂಖ್ಯೆ | ವಿಲೇವಾರಿ ಯಾಗದೇ ಉಳಿದಿರಲು ಕಾರಣ |
|---|---|---|---|---|
| 1 | ಬಂಗಾರ ಪೇಟೆ | 17 | 11 | ಯೋಜನೆಯ ಮಾರ್ಗಸೂಚಿಯನುಸಾರ ಪೂರ್ಣ ಪ್ರಮಾಣದ ದಾಖಲಾತಿಗಳನ್ನು ಸಲ್ಲಿಸದ ಕಾರಣ ವಿಲೇವಾರಿ ಯಾಗಿರುವುದಿಲ್ಲ. |
| 2 | ಕೆ.ಜಿ.ಎಫ್ | 08 | 11 | |
| 3 | ಕೋಲಾರ | 68 | 16 | |
| 4 | ಮಾಲೂರು | 16 | 19 | |
| 5 | ಮುಳಬಾಗಿಲು | 21 | 35 | |
| 6 | ಶ್ರೀನಿವಾಸಪುರ | 33 | 43 | |
| | ಒಟ್ಟು | **163** | **135** | |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಉ | ವಿಲೇವಾರಿಯಾಗದೆ ಉಳಿದಿರುವ ಅರ್ಜಿಗಳನ್ನು ಯಾವ ಕಾಲಮಿತಿಯೊಳಗಾಗಿ ವಿಲೇವಾರಿ ಮಾಡಲಾಗುವುದು: | ವಿಲೇವಾರಿಯಾಗದೇ ಉಳಿದಿರುವ ಅರ್ಜಿಗಳನ್ನು ಪೂರ್ಣ ದಾಖಲೆಗಳನ್ನು ಪಡೆದು ನಿಯಮಾನುಸಾರ ಪರಿಶೀಲಿಸಿ ಅರ್ಹ ಫಲಾನುಭವಿಗಳಿಗೆ ವಿತರಿಸಲು ಕ್ರಮಕೈಗೊಳ್ಳಲಾಗುವುದು. |

| | | |
|---|---|---|
| ಊ | ಪ್ರಸ್ತುತ ಇವರುಗಳಿಗೆ ನೀಡುತ್ತಿರುವ ಮಾಶಾಸನದ ಮೊತ್ತವೆಷ್ಟು: ಇದನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ: ಹಾಗಿದ್ದಲ್ಲಿ, ಯಾವಾಗ ಎಷ್ಟು ಪ್ರಮಾಣದಲ್ಲಿ ಹೆಚ್ಚಿಸಲಾಗುವುದು ಮತ್ತು ಯಾವಾಗಿನಿಂದ ಜಾರಿಗೆ ತರಲಾಗುವುದು? | • 2018-19ನೇ ಸಾಲಿನಲ್ಲಿ ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ/47/ಡಿಎಸ್‌ಪಿ/2018, ಬೆಂಗಳೂರು ದಿನಾಂಕ: 16.03.2018 ರಂತೆ ಶೇಕಡಾ 40 ರಿಂದ 75 ರಷ್ಟು ಅಂಗವೈಕಲ್ಯವಿರುವ ಅರ್ಹ ವಿಕಲಚೇತನರಿಗೆ ನೀಡಲಾಗುತ್ತಿದ್ದ, ಮಾಸಾಶನವನ್ನು ರೂ.500/- ರಿಂದ ರೂ.600/-ಗಳಿಗೆ ಹಾಗೂ ಶೇಕಡಾ 75 ಕ್ಕಿಂತ ಹೆಚ್ಚು ಅಂಗವೈಕಲ್ಯವಿರುವ ಅರ್ಹ ವಿಕಲಚೇತನರಿಗೆ ನೀಡಲಾಗುತ್ತಿದ್ದ ಮಾಸಾಶನವನ್ನು ರೂ.1,200/- ರಿಂದ ರೂ.1,400/-ಗಳನ್ನು ಹೆಚ್ಚಿಸಲಾಗಿದ್ದು, ಆದೇಶದ ಪತ್ರಿಯನ್ನು ಇದರೊಂದಿಗೆ ಲಗತ್ತಿಸಿದೆ.<br>• ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯ, ಬೆಂಗಳೂರು ರವರ ಪತ್ರ ದಿನಾಂಕ:01.02.2021ರಲ್ಲಿ ಮಾಸಾಶನ ಹೆಚ್ಚಿಸುವ ಸಂಬಂಧ ಪ್ರಸ್ತಾವನೆಯು ಸರ್ಕಾರದಲ್ಲಿ ಪರಿಶೀಲನಾ ಹಂತದಲ್ಲಿರುತ್ತದೆ ಎಂದು ತಿಳಿಸಿರುತ್ತಾರೆ. (ಪ್ರತಿ ಲಗತ್ತಿಸಿದೆ) |

ಸಂಖ್ಯೆ:ಮಮಇ/37/ಪಿಹೆಚ್‌ಪಿ/2021

(ಶಶಿಕಲಾ ಅ.ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ, ಬೆಂಗಳೂರು.

# Karnataka Legislative Council

| | |
|---|---|
| Starred Question Number : | 523 |
| Name of the Member of council: | Sri. Govind Raju (Local Body Sector) |
| Date to be Answered: | 05.02.2021 |
| Answer to be given by: | Hon'ble Minister for the Department for Women and Child, Empowerment for Differently Abled and Senior Citizens. |

<table>
<tr><th>Sl No</th><th>Question</th><th>Answer</th></tr>
<tr><td>1.</td><td>What are the Schemes implemented for the persons with disabilities during the last three years :( Provide Complete details)</td><td>The Schemes implemented by the Government for the Welfare of the Persons with Disabilities is enclosed (Annexure-1).</td></tr>
<tr><td>2.</td><td>What is the amount allocated and released by the Government during the last 3 years for the Welfare of Person with Disabilities in Kolar district</td><td>The budget allocated and released for Kolar district for the 2017-18, 2018-19 and 2019-20 for the Welfare of the Persons with Disabilities is enclosed (Annexure-2).</td></tr>
<tr><td>3.</td><td>Mention the Number of applications received from Persons with disabilities for Motorized Tricycles in Kolar district during the last 3 years<br>(Provide Taluk wise details)</td><td>
<table>
<tr><th>Sl</th><th>Taluk</th><th>Application submitted during last 3 years</th></tr>
<tr><td>1.</td><td>Bangarapete</td><td>28</td></tr>
<tr><td>2.</td><td>K.G.F</td><td>19</td></tr>
<tr><td>3.</td><td>Kolar</td><td>84</td></tr>
<tr><td>4.</td><td>Maluru</td><td>35</td></tr>
<tr><td>5.</td><td>Mulbagalu</td><td>56</td></tr>
<tr><td>6.</td><td>Srinivasapura</td><td>76</td></tr>
<tr><td colspan="2">Total</td><td>298</td></tr>
</table>
</td></tr>
</table>

<table>
<tr><td>4.</td><td>Among these applications how many have been disposed, how many remaining applications are pending, What are the reasons for not clearing the remaining; (Provide taluk wise details)</td><td>
<table>
<tr><th>Sl No</th><th>Taluk</th><th>Applications disposed</th><th>Applications Pending</th><th>Reason for pending</th></tr>
<tr><td>1.</td><td>Bangarapete</td><td>17</td><td>11</td><td rowspan="7">Due to non produce of necessary documents as per scheme guidelines</td></tr>
<tr><td>2.</td><td>K.G.F</td><td>08</td><td>11</td></tr>
<tr><td>3.</td><td>Kolar</td><td>68</td><td>16</td></tr>
<tr><td>4.</td><td>Maluru</td><td>16</td><td>19</td></tr>
<tr><td>5.</td><td>Mulbagalu</td><td>21</td><td>35</td></tr>
<tr><td>6.</td><td>Srinivasapura</td><td>33</td><td>43</td></tr>
<tr><td colspan="2">Total</td><td>163</td><td>135</td></tr>
</table>
</td></tr>
<tr><td>5.</td><td>When and with what time limit the Pending application will be disposed?</td><td>The pending Application will be cleared after getting appropriate documents as per Scheme guidelines within stipulated as per the rules.</td></tr>
<tr><td>6.</td><td>What is the amount of maintenance allowance paid to the persons with Disabilities, Is there any proposal to enhance the amount if so what is the proposed amount and from when shall this come in to effect;</td><td>During the year 2018-19, in Accordance with the Government order No:RD/47/DSP/2018, dated:16.03.2018, the amount of Rupees 500 to 600 enhanced for Persons with Disabilities having 40% to 75% and an amount of Rs.1200 to 1400 enhanced for Persons with Disabilities with 75% and above. The order copy is enclosed for ready reference.<br>As per the Letter Dated: 01.02.2021 received from the Department of Social Security and Pensions, the proposal to enhance the maintenance allowance paid to Pwds is under process in the Government.</td></tr>
</table>

NO:WCD 37 PHP 2021

(Shashikala. A . Jolle)
Minister for Women and Child Department
and Empowerment of Differently Abled and
Senior Citizens,

## ಅನುಬಂಧ-1

## ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ವಿಕಲಚೇತನ ಹಾಗೂ ಹಿರಿಯ ನಾಗರಿಕರಿಗಾಗಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು

## ವಿಕಲಚೇತನರಿಗಾಗಿ ಜಾರಿಗೊಳಿಸುತ್ತಿರುವ ಯೋಜನೆಗಳು

(ಎ) ಶೈಕ್ಷಣಿಕ:-

**1) ಶ್ರವಣದೋಷವುಳ್ಳ ಮಕ್ಕಳಿಗಾಗಿ ವಸತಿಯುತ ಶಾಲೆಗಳು:**

ಶ್ರವಣದೋಷವುಳ್ಳ ಮಕ್ಕಳಿಗಾಗಿ ಮೈಸೂರು, ಕಲಬುರ್ಗಿ, ಬಳ್ಳಾರಿ, ಬೆಳಗಾವಿ ಜಿಲ್ಲೆಗಳಲ್ಲಿ 4 ಕಿವುಡು ಮಕ್ಕಳ ವಸತಿ ಶಾಲೆಗಳನ್ನು ಇಲಾಖಾವತಿಯಿಂದ ನಡೆಸಲಾಗುತ್ತಿದೆ.ಈ ಶಾಲೆಗಳಲ್ಲಿ ಮಕ್ಕಳಿಗೆ ಉಚಿತ ವಸತಿ, ಊಟ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ.ಈ ಪೈಕಿ ಶ್ರವಣದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ಬೆಳಗಾವಿಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ.

**2. ಅಂಧ ಮಕ್ಕಳಿಗಾಗಿ ವಸತಿಯುತ ಶಾಲೆಗಳು:**

ಅಂಧ ಮಕ್ಕಳಿಗಾಗಿ ಕಲಬುರ್ಗಿ, ಮೈಸೂರು, ದಾವಣಗೆರೆ ಹಾಗೂ ಹುಬ್ಬಳ್ಳಿಯಲ್ಲಿ ವಿಶೇಷ ಶಾಲೆಗಳನ್ನು ನಡೆಸಲಾಗುತ್ತಿದೆ.ಈ ಶಾಲೆಗಳಲ್ಲಿ ದೃಷ್ಟಿದೋಷವುಳ್ಳ ಮಕ್ಕಳಿಗೆ ಉಚಿತ ಊಟ, ವಸತಿ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ.ಈ ಪೈಕಿ ದೃಷ್ಟಿದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ದಾವಣಗೆರೆಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ.

**3. 1982ರ ರಾಜ್ಯ ಅನುದಾನ ಸಂಹಿತೆಯಡಿ ನಡೆಯುತ್ತಿರುವ ವಿಶೇಷ ಶಾಲೆಗಳು:**

(ಅ) 1982ರ ರಾಜ್ಯ ಅನುದಾನ ಸಂಹಿತೆಯಡಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 34 ವಿಶೇಷ ಶಾಲೆ/ ತರಬೇತಿ ಕೇಂದ್ರಗಳನ್ನು ದೈಹಿಕ, ಅಂಧ, ಶ್ರವಣದೋಷ ಹಾಗೂ ಬುದ್ಧಿಮಾಂದ್ಯ ಮಕ್ಕಳಿಗಾಗಿ ನಡೆಸಲಾಗುತ್ತಿದೆ.ರಾಜ್ಯ ಸರ್ಕಾರದಿಂದ ಅನುದಾನವನ್ನು ಜಿಲ್ಲಾ ಪಂಚಾಯತ್ ಮೂಲಕ ಬಿಡುಗಡೆ ಮಾಡಲಾಗುತ್ತಿದೆ.

**ವಿಕಲಚೇತನರಿಗೆ ವೃತ್ತಿ ತರಬೇತಿ ಕೇಂದ್ರಗಳು:**

ಈ ಯೋಜನೆಯಡಿ ವಿವಿಧ ರೀತಿಯ ವಿಕಲಚೇತನರಿಗೆ ವೃತ್ತಿ ತರಬೇತಿಯನ್ನು ನೀಡುವುದಾಗಿದೆ.1982ರ ರಾಜ್ಯ ಅನುದಾನ ಸಂಹಿತೆಯಡಿ 5 ವೃತ್ತಿ ತರಬೇತಿ ಕೇಂದ್ರಗಳನ್ನು ರಾಜ್ಯ ಸಹಾಯಾನುದಾನದಡಿ ಬೆಂಗಳೂರಿನಲ್ಲಿ 03 ಮತ್ತು ಮೈಸೂರಿನಲ್ಲಿ 02 ಹಾಗೂ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಂದು ವಾಕ್ ಶ್ರವಣ ಕೇಂದ್ರವನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದೆ. ವೃತ್ತಿ ತರಬೇತಿ ಕೇಂದ್ರಗಳಲ್ಲಿ ವಿವಿಧ ರೀತಿಯ ವಿಕಲಚೇತನರಿಗೆ ಫಿಟ್ಟರ್, ಟರ್ನರ್, ಸರಳ ಇಂಜಿನಿಯರಿಂಗ್, ಬೆತ್ತ, ಹಗ್ಗ, ಚಾಪೆ ಹೆಣೆಯುವುದು ಹಾಗೂ ಪ್ಲಾಸ್ಟಿಕ್ ಮೌಲ್ಡಿಂಗ್ ತರಬೇತಿಯನ್ನು ನೀಡಲಾಗುತ್ತಿದೆ.ಪ್ರತಿ ತರಬೇತಿ ಕೇಂದ್ರದಲ್ಲಿ ವಾರ್ಷಿಕ 25 ಫಲಾನುಭವಿಗಳು ತರಬೇತಿ ಪಡೆಯಲು ಅವಕಾಶವಿರುತ್ತದೆ.

**(ಆ)ಅಂಗವಿಕಲ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ಯೋಜನೆ:**

ಈ ಯೋಜನೆಯಡಿ ಬುದ್ಧಿಮಾಂದ್ಯ (ಸೆರಬ್ರಲ್ ಪಾಲ್ಸಿ, ಆಟಿಸಂ), ದೃಷ್ಟಿದೋಷ, ಶ್ರವಣದೋಷವುಳ್ಳ ಮಕ್ಕಳಿಗಾಗಿ ವಸತಿಯುತ ಹಾಗೂ ವಸತಿರಹಿತ ಶಾಲೆಗಳು ಸೇರಿದಂತೆ ಒಟ್ಟು 138 ವಿಶೇಷ ಶಾಲೆಗಳು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುತ್ತಿವೆ. ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಶ್ರವಣದೋಷವುಳ್ಳ ಹಾಗೂ

ದೃಷ್ಟಿದೋಷವುಳ್ಳ ಮಕ್ಕಳ ವಸತಿಯುತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.6200/- ರಂತೆ ಹಾಗೂ ವಸತಿರಹಿತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.5200/- ರಂತೆ ಹಾಗೂ ಬುದ್ಧಿಮಾಂದ್ಯ ಮಕ್ಕಳ ಮಕ್ಕಳ ವಸತಿಯುತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.6800/- ರಂತೆ ಹಾಗೂ ವಸತಿರಹಿತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ. 6000/- ರಂತೆ ವರ್ಷದಲ್ಲಿ 10 ತಿಂಗಳ ಅವಧಿಗೆ ಅನುದಾನವನ್ನು ಮಂಜೂರು ಮಾಡಲಾಗುತ್ತಿದೆ.ಈ ಅನುದಾನದಲ್ಲಿ ಶಿಕ್ಷಕರ ಗೌರವಧನ, ಮಕ್ಕಳ ಆಹಾರ ವೆಚ್ಚ, ಕಟ್ಟಡದ ಬಾಡಿಗೆ ಹಾಗೂ ನಿರ್ವಹಣಾ ವೆಚ್ಚ, ಸಮವಸ್ತ್ರ, ವೈದ್ಯಕೀಯ ವೆಚ್ಚ ಹಾಗೂ ಸಾದಿಲ್ವಾರು ವೆಚ್ಚಗಳು ಒಳಗೊಂಡಿರುತ್ತವೆ.

(ಇ) **ಕೇಂದ್ರ ಸರ್ಕಾರದ ದೀನ್‌ದಯಾಳ್ ಪುನರ್ವಸತಿ ಯೋಜನೆಯಡಿ** 8 ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವಿಶೇಷ ಶಾಲೆ /ವೃತ್ತಿ ತರಬೇತಿ ಕೇಂದ್ರಗಳು ನಡೆಯುತ್ತಿದ್ದು, ಸದರಿ ಶಾಲೆ ಹಾಗೂ ತರಬೇತಿ ಕೇಂದ್ರಗಳಿಗೆ ಕೇಂದ್ರ ಸರ್ಕಾರದಿಂದ ಶೇ.90ರಷ್ಟು ಅನುದಾನವನ್ನು ಮಂಜೂರು ಮಾಡಲಾಗುತ್ತಿದ್ದು, ಉಳಿದ ಶೇ.10ರಷ್ಟು ವೆಚ್ಚವನ್ನು ಸಂಸ್ಥೆಯವರು ಭರಿಸಬೇಕಾಗಿರುತ್ತದೆ.

**4. ಅಂಗವಿಕಲ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮತ್ತು ಪ್ರೋತ್ಸಾಹಧನ:**

ಈ ಯೋಜನೆಯಡಿ ಒಂದನೇ ತರಗತಿಯಿಂದ ಸ್ನಾತಕೋತ್ತರ ಪದವಿಯವರೆಗೆ ವ್ಯಾಸಂಗ ಮಾಡುತ್ತಿರುವ ಅರ್ಹ ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವನ್ನು ಆಯಾ ಜಿಲ್ಲಾ ಕಛೇರಿಗಳ ಮೂಲಕ ಮಂಜೂರು ಮಾಡಲಾಗುತ್ತಿದೆ. 2001-02ನೇ ಸಾಲಿನಿಂದ ಈ ಯೋಜನೆಯ ಫಲಾನುಭವಿಗಳಿಗೆ ಆದಾಯ ಮಿತಿಯಿಂದ ವಿನಾಯಿತಿಗೊಳಿಸಲಾಗಿದೆ.

**5. ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ಯೋಜನೆ:**

ಸಾರ್ವತ್ರಿಕ ಪರೀಕ್ಷೆಗಳಲ್ಲಿ ಶೇಕಡ 60 ಕ್ಕಿಂತಲೂ ಹೆಚ್ಚಿನ ಅಂಕಗಳನ್ನು ಪಡೆದ ಪ್ರತಿಭಾನ್ವಿತ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡುವ ಯೋಜನೆ ಇದಾಗಿದೆ.ಈ ಯೋಜನೆಯನ್ನು 2001-02ನೇ ಸಾಲಿನಿಂದ ಬಿ.ಎಡ್, ಎಂ.ಎಡ್. ಮತ್ತು ಟಿ.ಸಿ.ಹೆಚ್. ವಿದ್ಯಾರ್ಥಿಗಳಿಗೂ ವಿಸ್ತರಿಸಲಾಗಿದೆ.

**6. ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಶುಲ್ಕ ಮರುಪಾವತಿ:**

ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಎಸ್.ಎಸ್.ಎಲ್.ಸಿ ನಂತರ ಉನ್ನತ ಶಿಕ್ಷಣ, ವೃತ್ತಿ ಶಿಕ್ಷಣ, ತಾಂತ್ರಿಕ ಶಿಕ್ಷಣ, ಸ್ನಾತಕೋತ್ತರ, ಔದ್ಯೋಗಿಕ ಶಿಕ್ಷಣಗಳಿಗೆ ನಿಯಮಾನುಸಾರ ಆಯ್ಕೆಯಾಗುವ ವಿದ್ಯಾರ್ಥಿಗಳಿಗೆ ಸರ್ಕಾರವು ನಿಗದಿಪಡಿಸಿರುವ ಪರೀಕ್ಷಾ ಶುಲ್ಕ ಬೋಧನಾ ಶುಲ್ಕ, ಪ್ರಯೋಗಾಲಯ ಶುಲ್ಕ, ಕ್ರೀಡಾ ಶುಲ್ಕ ಹಾಗೂ ಗ್ರಂಥಾಲಯ ಶುಲ್ಕಗಳನ್ನು ಮರುಪಾವತಿಸುವ ಯೋಜನೆಯನ್ನು 2013-14ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಸೌಲಭ್ಯ ಪಡೆಯುವ ವಿದ್ಯಾರ್ಥಿಗಳಿಗೆ ಯಾವುದೇ ಆದಾಯಮಿತಿ ಇರುವುದಿಲ್ಲ. ವೈದ್ಯಕೀಯ ಮಂಡಳಿಯವರು ಶಿಫಾರಸ್ಸು ಮಾಡಿರುವ ವಿಕಲಚೇತನ ಅಭ್ಯರ್ಥಿಗಳು ಮಾತ್ರ ಈ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ.

**7.ಬ್ರೈಲ್ ಮುದ್ರಣಾಲಯ:**

ದೃಷ್ಟಿದೋಷವುಳ್ಳ ಮಕ್ಕಳಿಗೆ ಬೇಕಾಗುವ ಬ್ರೈಲ್ ಪುಸ್ತಕಗಳನ್ನು ಮುದ್ರಿಸಿ ಸಂಬಂಧಪಟ್ಟ ಅಂಧರ ಶಾಲೆಗಳಿಗೆ ಮೈಸೂರಿನಲ್ಲಿರುವ ಬ್ರೈಲ್ ಮುದ್ರಣಾಲಯದ ಮೂಲಕ ಉಚಿತವಾಗಿ ಸರಬರಾಜು ಮಾಡಲಾಗುತ್ತಿದೆ.

**8. ವಿಶೇಷ ಶಿಕ್ಷಣ ತರಬೇತಿ ಕೇಂದ್ರ ಯೋಜನೆ:**

ದೃಷ್ಟಿದೋಷವುಳ್ಳ ಹಾಗೂ ಶ್ರವಣದೋಷವುಳ್ಳ ವಿದ್ಯಾರ್ಥಿಗಳಿಗೆ ಬೋಧಿಸುವ ಶಿಕ್ಷಕರಿಗೆ ವಿಶೇಷ ಶಿಕ್ಷಣ ನೀಡಲು ತಲಾ ಒಂದರಂತೆ ವಿಶೇಷ ಶಿಕ್ಷಕರ ತರಬೇತಿ ಕೇಂದ್ರವನ್ನು ಮೈಸೂರಿನಲ್ಲಿ ನಡೆಸುತ್ತಿದ್ದು, ಪ್ರತಿ ವರ್ಷ ಪ್ರತಿ ಕೇಂದ್ರದಲ್ಲಿ 25 ಪ್ರಶಿಕ್ಷಣಾರ್ಥಿಗಳು ತರಬೇತಿ ಪಡೆಯಲು ಅವಕಾಶವಿರುತ್ತದೆ.

**9. ಮಾನಸಿಕ ಅಸ್ವಸ್ಥ, ಸೆರಬ್ರಲ್ ಪಾಲ್ಸಿ, ಆಟಿಸಂ ಮಕ್ಕಳ ಹಗಲು ಯೋಗಕ್ಷೇಮ ಕೇಂದ್ರಗಳು:** ಸೆರಬ್ರಲ್ ಪಾಲ್ಸಿ, ಆಟಿಸಂ, ಮಾನಸಿಕ ಅಸ್ವಸ್ಥ ಹಾಗೂ ತೀವ್ರತರದ ಅಂಗವೈಕಲ್ಯತೆ ಹೊಂದಿರುವ ಮೂರರಿಂದ 25 ವರ್ಷದ ಒಳಗಿನ ಮಕ್ಕಳಿಗಾಗಿ 02 ಹಗಲು ಯೋಗಕ್ಷೇಮ ಕೇಂದ್ರಗಳನ್ನು ಬೆಂಗಳೂರು ನಗರ ಜಿಲ್ಲೆಯಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸುತ್ತಿದ್ದು, ಪ್ರತಿ ಕೇಂದ್ರದಲ್ಲಿ 25 ಮಕ್ಕಳನ್ನು ದಾಖಲಿಸಲು ಅವಕಾಶವಿದ್ದು, ಪ್ರತಿ ಮಗುವಿಗೆ ಮಾಸಿಕ ರೂ.10,000/-ಗಳಂತೆ ವಾರ್ಷಿಕ 25.00 ಲಕ್ಷಗಳನ್ನು ಮಂಜೂರು ಮಾಡಲಾಗುತ್ತಿದೆ.

**(ಬಿ) ಉದ್ಯೋಗ ಮತ್ತು ತರಬೇತಿ:**

**2. ಅಂಗವಿಕಲ ಪುರುಷ ಹಾಗೂ ಮಹಿಳೆಯರ ವಸತಿನಿಲಯ:**

ಬೆಂಗಳೂರಿನ ಕೆಂಗೇರಿಯಲ್ಲಿ ವಿಕಲಚೇತನ ಮಹಿಳೆ ಮತ್ತು ವಿಕಲಚೇತನ ಪುರುಷರಿಗಾಗಿ ಅಂಗವಿಕಲ ಉದ್ಯೋಗಸ್ಥ ನೌಕರರು ಮತ್ತು ಪ್ರಶಿಕ್ಷಣಾರ್ಥಿಗಳಿಗಾಗಿ ಮಹಿಳೆಯರು ಹಾಗೂ ಪುರುಷರಿಗಾಗಿ ಪ್ರತ್ಯೇಕವಾದ ವಸತಿ ನಿಲಯವನ್ನು ಬೆಂಗಳೂರು ನಗರ ಜಿಲ್ಲೆಯಲ್ಲಿ ನಡೆಸಲಾಗುತ್ತಿದೆ. ಪ್ರಸ್ತುತ ಈ ಎರಡೂ ವಸತಿ ನಿಲಯಗಳು ಬೆಂಗಳೂರಿನ ಕೆಂಗೇರಿಯಲ್ಲಿ ನಡೆಯುತ್ತಿವೆ. ಪ್ರತಿ ವಸತಿ ನಿಲಯದಲ್ಲಿ 50 ನಿವಾಸಿಗಳನ್ನು ದಾಖಲಿಸಲು ಅವಕಾಶವಿರುತ್ತದೆ.

**3. ಆಧಾರ ಯೋಜನೆ :**

ವಿಕಲಚೇತನರು ಸ್ವಯಂ ಉದ್ಯೋಗ ಕೈಗೊಂಡು ಜೀವನ ಸಾಗಿಸಲು ಅನುಕೂಲವಾಗುವಂತೆ ಆಧಾರ ಎಂಬ ಸಾಲ ಯೋಜನೆಯನ್ನು ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ ನೇತೃತ್ವದಲ್ಲಿ ಜಾರಿಗೊಳಿಸಲಾಗುತ್ತಿದೆ.ಈ ಯೋಜನೆಯಡಿ ರೂ.1.00 ಲಕ್ಷ ರೂ.ಗಳ ಸಹಾಯಧನವನ್ನು ನೀಡಲು ಅವಕಾಶವಿದ್ದು, ಇದರಲ್ಲಿ ಶೇ.50ರಷ್ಟು ಬಡ್ಡಿ ಸಹಿತವಾಗಿ ಬ್ಯಾಂಕ್ ಸಾಲ ಮತ್ತು ಶೇ.50ರಷ್ಟು ಸಹಾಯಧನ ಒದಗಿಸಲಾಗುವುದು.

**4. ಗ್ರಾಮೀಣ ಪುನರ್ವಸತಿ ಯೋಜನೆ:**

ಈ ಯೋಜನೆಯನ್ನು ರಾಜ್ಯದ ಎಲ್ಲಾ 30 ಜಿಲ್ಲೆಗಳ 176 ತಾಲ್ಲೂಕುಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.ಪ್ರತಿ ಗ್ರಾಮ ಪಂಚಾಯತಿ ಅಡಿಯಲ್ಲಿ ಎಸ್.ಎಸ್.ಎಲ್.ಸಿ. ಉತ್ತೀರ್ಣ/ ಅನುತ್ತೀರ್ಣರಾದ ಸಮರ್ಥ ವಿಕಲಚೇತನರನ್ನು ಗ್ರಾಮೀಣ ಪುನರ್ವಸತಿ ಕಾರ್ಯಕರ್ತರೆಂದು ಹಾಗೂ ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಸ್ಥಳೀಯ ಸಮರ್ಥ ಪದವೀಧರ ವಿಕಲಚೇತನರೊಬ್ಬರನ್ನು ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರೆಂದು, ಸ್ಥಳೀಯ ನಗರ ಪ್ರದೇಶಗಳಲ್ಲಿ ನಗರ ಪುನರ್ವಸತಿ ಕಾರ್ಯಕರ್ತರೆಂದು ಮತ್ತು ನಿರ್ದೇಶನಾಲಯದಲ್ಲಿ ರಾಜ್ಯ ಸಂಯೋಜಕರನ್ನು ಗೌರವಧನ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆ. ಈ ಕಾರ್ಯಕರ್ತರ ಮೂಲಕ ವಿಕಲಚೇತನರಿಗೆ ಎಲ್ಲಾ ಸೇವಾ ಸೌಲಭ್ಯಗಳನ್ನು ಅವರಿರುವ ಸ್ಥಳಗಳಲ್ಲಿಯೇ ವಿಕಲಚೇತನರ ಮೂಲಕವೇ ತಲುಪಿಸಲಾಗುವುದು.

ಸರ್ಕಾರದ ಆದೇಶ ಸಂಖ್ಯೆ:ಮಮಇ/241/ಪಿಹೆಚ್‌ಪಿ/2019, ದಿನಾಂಕ: 07-02-2020ರಂತೆ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಹಾಗೂ ನಗರ ಪುನರ್ವಸತಿ ಕಾರ್ಯಕರ್ತರುಗಳ ಗೌರವಧನವನ್ನು ರೂ.3000/-ಗಳಿಂದ ರೂ.6000/-ಗಳಿಗೆ ಹಾಗೂ ವಿವಿದ್ದೋದ್ದೇಶ ಪುನರ್ವಸತಿ ಕಾರ್ಯಕರ್ತರ ಗೌರವಧನವನ್ನು ರೂ.6000/-ಗಳಿಂದ ರೂ.12,000/-ಗಳಿಗೆ ಹೆಚ್ಚಿಸಿ ಆದೇಶ ಹೊರಡಿಸಲಾಗಿದೆ.

ಮರಣ ಪರಿಹಾರ ನಿಧಿ ಯೋಜನೆ: ಗ್ರಾಮೀಣ ಪುನರ್ವಸತಿ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಕಾರ್ಯಕರ್ತರು ನಿಧನ ಹೊಂದಿದ್ದಲ್ಲಿ ರೂ.50,000/-ಗಳ ಪರಿಹಾರ ಧನ ನೀಡಲು ಅವಕಾಶವಿರುತ್ತದೆ.

5. **ಉದ್ಯೋಗಸ್ಥ ವಿಕಲಚೇತನ ಮಹಿಳೆಯರಿಗೆ ವಸತಿ ನಿಲಯಗಳು:**

ಅಂಗವಿಕಲ ಉದ್ಯೋಗಸ್ಥ ಮಹಿಳೆಯರಿಗಾಗಿ ಹಾಗೂ ವಿದ್ಯಾರ್ಥಿನಿ/ತರಬೇತಾರ್ಥಿಗಳಿಗೆ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 25 ಜಿಲ್ಲೆಗಳಲ್ಲಿ ಮಹಿಳಾ ವಸತಿ ನಿಲಯಗಳು (ಬೆಂಗಳೂರು ನಗರ ಜಿಲ್ಲೆಯಲ್ಲಿ 4 ವಸತಿ ನಿಲಯಗಳು) ನಡೆಯುತ್ತಿವೆ. ಸದರಿ ವಸತಿ ನಿಲಯದಲ್ಲಿ ಉದ್ಯೋಗಸ್ಥ ವಿಕಲಚೇತನ ಮಹಿಳೆಯರಿಗೆ ಮತ್ತು ವಿದ್ಯಾರ್ಥಿನಿಯರಿಗೆ ಹಾಗೂ ತರಬೇತಿದಾರರಿಗೆ ವಸತಿ ಸೌಲಭ್ಯವನ್ನು ಕಲ್ಪಿಸಲಾಗಿದೆ. ಸದರಿ ವಸತಿ ನಿಲಯದಲ್ಲಿ ವಿದ್ಯಾರ್ಥಿನಿಯರು ಹಾಗೂ ತರಬೇತಿದಾರರಿಗೆ ಉಚಿತ ಊಟದ ವ್ಯವಸ್ಥೆಯಿದ್ದು, ಉದ್ಯೋಗಸ್ಥ ಮಹಿಳೆಯರು ಮಾಸಿಕ 800/-ಗಳನ್ನು ಪಾವತಿಸಬೇಕಾಗಿರುತ್ತದೆ. ರಾಮನಗರ, ದಾವಣಗೆರೆ, ರಾಯಚೂರು, ಉತ್ತರ ಕನ್ನಡ ಹಾಗೂ ಚಿಕ್ಕಮಗಳೂರು ಈ ಜಿಲ್ಲೆಗಳಲ್ಲಿ ಅಡಳಿತಾತ್ಮಕ ಕಾರಣಗಳಿಂದ ವಸತಿ ನಿಲಯಗಳನ್ನು ನಡೆಯುತ್ತಿಲ್ಲ.

**ಸಿ. ಸಾಮಾಜಿಕ ಭದ್ರತಾ ಯೋಜನೆಗಳು:**

1. **ಸಮಾಜ ಸೇವಾ ಸಂಕೀರ್ಣ:**

ನಿರ್ಗತಿಕ ಬುದ್ಧಿಮಾಂದ್ಯ ಪುರುಷರಿಗಾಗಿ ಸಮಾಜ ಸೇವಾ ಸಂಕೀರ್ಣ ಸಂಸ್ಥೆಯು ಬೆಂಗಳೂರಿನಲ್ಲಿ ಸರ್ಕಾರದ ವತಿಯಿಂದ ನಡೆಯುತ್ತಿದ್ದು, ಈ ಸಂಸ್ಥೆಯಲ್ಲಿ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ, ಸಂರಕ್ಷಣೆ ಒದಗಿಸಲಾಗುತ್ತಿದೆ. ಪ್ರಸ್ತುತ ಸಂಸ್ಥೆಯಲ್ಲಿ 85 ನಿವಾಸಿಗಳು ದಾಖಲಾಗಿರುತ್ತಾರೆ.

2. **ಮಂದಮತಿ ಮಹಿಳೆಯರ ಅನುಪಾಲನಾ ಗೃಹ:**

18 ವರ್ಷ ಮೇಲ್ಪಟ್ಟ ನಿರ್ಗತಿಕ ಮಹಿಳಾ ಬುದ್ಧಿಮಾಂದ್ಯರಿಗೆ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ ಮತ್ತು ಸಂರಕ್ಷಣೆ ಒದಗಿಸುವ ಉದ್ದೇಶದಿಂದ ಮಂದಮತಿ ಮಹಿಳೆಯರ ಅನುಪಾಲನಾ ಗೃಹಗಳನ್ನು ಬೆಂಗಳೂರು ನಗರ ಹಾಗೂ ಹುಬ್ಬಳ್ಳಿಯಲ್ಲಿ ಇಲಾಖಾವತಿಯಿಂದ ನಡೆಸಲಾಗುತ್ತಿದೆ. ಪ್ರಸ್ತುತ ಬೆಂಗಳೂರು ಅನುಪಾಲನಾ ಕೇಂದ್ರದಲ್ಲಿ 100 ಮಂದಿ ಹಾಗೂ ಹುಬ್ಬಳ್ಳಿ ಅನುಪಾಲನ ಕೇಂದ್ರದಲ್ಲಿ 70 ನಿವಾಸಿಗಳು ದಾಖಲಾಗಿರುತ್ತಾರೆ.

3. **ಮಾನಸಿಕ ಅಸ್ವಸ್ಥರಿಗೆ ಮಾನಸ ಕೇಂದ್ರಗಳು:**

ಮಾನಸಿಕ ಅಸ್ವಸ್ಥರಿಗಾಗಿ ಮಾನಸ ಕೇಂದ್ರಗಳನ್ನು ಬೆಂಗಳೂರು ನಗರ ಹಾಗೂ ಬೆಳಗಾವಿ ಜಿಲ್ಲೆಗಳಲ್ಲಿ ನಡೆಸುತ್ತಿದ್ದು, ರಾಜ್ಯ ಉಚ್ಚ ನ್ಯಾಯಾಲಯ ಮತ್ತು ಅಧೀನ ನ್ಯಾಯಾಲಯಗಳಿಂದ ಆದೇಶಿಸಲ್ಪಡುವ ಮಾನಸಿಕ ಅಸ್ವಸ್ಥರನ್ನು ಹಾಗೂ ರಸ್ತೆಗಳಲ್ಲಿ ಓಡಾಡುವ ನಿರ್ಗತಿಕ ಮಾನಸಿಕ ಅಸ್ವಸ್ಥರನ್ನು ಈ ಕೇಂದ್ರಗಳಲ್ಲಿ ನಿರ್ದಿಷ್ಟ ವೈದ್ಯಕೀಯ ಪ್ರಾಧಿಕಾರದ ಆದೇಶದ ಮೇರೆಗೆ ದಾಖಲಿಸಲು ಅವಕಾಶವಿರುತ್ತದೆ. ಈ ಕೇಂದ್ರಗಳಲ್ಲಿ ಫಲಾನುಭವಿಗಳಿಗೆ ಉಚಿತ ಊಟ, ವಸತಿ, ವೈದ್ಯಕೀಯ ಶುಶ್ರೂಷೆ, ವೈದ್ಯಕೀಯ ಸಲಹೆ(ಕೌನ್ಸಲಿಂಗ್) ಸೌಲಭ್ಯವನ್ನು ನೀಡಲಾಗುತ್ತಿದ್ದು, ಇವು ಅಲ್ಪಾವಧಿ ಕೇಂದ್ರಗಳಾಗಿರುತ್ತವೆ.

**4. ಬುದ್ಧಿಮಾಂದ್ಯ ಮಕ್ಕಳ ಪೋಷಕರಿಗೆ ವಿಮಾ ಯೋಜನೆ:**

ಬುದ್ಧಿಮಾಂದ್ಯ ಮಕ್ಕಳ/ವ್ಯಕ್ತಿಗಳ ತಂದೆ: ತಾಯಿ: ಪೋಷಕರ ವಿಮಾ ಯೋಜನೆಯನ್ನು ಭಾರತೀಯ ಜೀವ ವಿಮಾ ನಿಗಮದ ಮೂಲಕ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಬುದ್ಧಿಮಾಂದ್ಯ ಮಕ್ಕಳ/ವ್ಯಕ್ತಿಗಳ ತಂದೆ:ತಾಯಿ: ಪೋಷಕರು ಮರಣ ಹೊಂದಿದ ನಂತರ ಬುದ್ಧಿಮಾಂದ್ಯ ಮಕ್ಕಳ ಜೀವನ ನಿರ್ವಹಣೆಗಾಗಿ ರೂ.20,000/-ಗಳ ಪರಿಹಾರ ಧನವನ್ನು ಕುಟುಂಬದ ನಾಮ ನಿರ್ದೇಶಿತ ಸದಸ್ಯರಿಗೆ ಪಾವತಿಸಲಾಗುತ್ತಿದೆ.

**5. ವಿಕಲಚೇತನ ವ್ಯಕ್ತಿಗಳನ್ನು ಸಾಮಾನ್ಯರು ಮದುವೆಯಾದಲ್ಲಿ ಪ್ರೋತ್ಸಾಹ ಧನ ನೀಡುವ ಯೋಜನೆ:**

ವಿಕಲಚೇತನ ಯುವಕ/ಯುವತಿಯರನ್ನು ವಿವಾಹವಾಗುವ ಸಾಮಾನ್ಯ ಯುವಕ/ ಯುವತಿಯರಿಗೆ ನಿರಂತರವಾಗಿ ಮಾಸಿಕ ಆದಾಯ ದೊರಕಿಸಲು ವಿಕಲಚೇತನ ವ್ಯಕ್ತಿಯ ಹೆಸರಿನಲ್ಲಿ ರೂ.50,000/-ಗಳನ್ನು ಮದುವೆಯಾದ ಸಾಮಾನ್ಯ ವ್ಯಕ್ತಿ ಹಾಗೂ ವಿಕಲಚೇತನರ ಜಂಟಿ ಹೆಸರಿನಲ್ಲಿ 05 ವರ್ಷದ ಅವಧಿಗೆ ಹೂಡಿಕೆಯ ರೂಪದಲ್ಲಿ ನೀಡಿ ಪ್ರೋತ್ಸಾಹ ನೀಡಲು ಹಾಗೂ ಅದರಿಂದ ಬರುವ ಬಡ್ಡಿ ಹಣವನ್ನು ಉಪಯೋಗಿಸುವುದು ಹಾಗೂ 05 ವರ್ಷಗಳ ನಂತರ ಠೇವಣಿ ಮೊತ್ತವನ್ನು ವಾಪಸ್ಸು ಪಡೆಯಬಹುದು ಅಥವಾ ಮುಂದುವರೆಸಲು ಅವಕಾಶವಿರುತ್ತದೆ.

**6. ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಆರೈಕೆ ಭತ್ಯೆ ಒದಗಿಸುವ ಯೋಜನೆ :**

ಅಂಧ ಮಹಿಳೆಯರು ಮಗುವಿಗೆ ಜನ್ಮ ನೀಡಿದಾಗ ಆ ಮಗುವನ್ನು ಇತರೆ ಸಾಮಾನ್ಯ ತಾಯಂದಿರಂತೆ ಆರೈಕೆ ಮಾಡುವುದು ಕಷ್ಟಕರವಾಗಿರುತ್ತದೆ.ಇಂತಹ ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಆರೈಕೆ ಮಾಡಲು ಆಯಾ ಸೇವೆ, ಆರೋಗ್ಯ ಪಾಲನೆ, ಪೌಷ್ಠಿಕ ಆಹಾರ, ಔಷಧೋಪಚಾರಗಳಿಗೆ ಮಾಹೆಯಾನ ರೂ.2000/- ದಂತೆ 5 ವರ್ಷಗಳ ಅವಧಿಗೆ ಸಹಾಯಧನವನ್ನು ನೀಡಲಾಗುತ್ತಿದೆ.ಈ ಸೌಲಭ್ಯವನ್ನು ಕನಿಷ್ಠ 2 ಮಕ್ಕಳವರೆಗೆ ಪಡೆಯಬಹುದಾಗಿದೆ.

**(ಡಿ) ಪುನರ್ವಸತಿ ಯೋಜನೆಗಳು:**

**1. ಅಂಗವಿಕಲರಿಗೆ ಸಾಧನ ಸಲಕರಣೆಗಳು :**

ಈ ಯೋಜನೆಯಡಿಯಲ್ಲಿ ಅಂಗವಿಕಲರಿಗೆ ಅವಶ್ಯವಾಗಿರುವ ಸಾಧನ ಸಲಕರಣೆಗಳನ್ನು ನೀಡಲಾಗುತ್ತಿದೆ. ಫಲಾನುಭವಿಯ ಕುಟುಂಬದ ವಾರ್ಷಿಕ ಆದಾಯ ಮಿತಿಯನ್ನು ಗ್ರಾಮೀಣ ಪ್ರದೇಶದ ಫಲಾನುಭವಿಗಳಿಗೆ ರೂ.11,500/- ಮತ್ತು ನಗರ ಪ್ರದೇಶದ ಫಲಾನುಭವಿಗಳಿಗೆ ರೂ.24,000/- ನಿಗದಿಗೂಳಿಸಲಾಗಿದೆ. ಈ ಯೋಜನೆಯಡಿ ರೂ.15,000/-ಗಳ ಮಿತಿಯೊಳಗೆ ವಿಕಲಚೇತನರಿಗೆ ಅವಶ್ಯವಿರುವ ಕ್ಯಾಲಿಪರ್ಸ್, ಕ್ರಚರ್ಸ್, ಶ್ರವಣ ಸಾಧನ, ವೈಟ್ ಕೇನ್, ಬ್ರೈಲ್ ವಾಚ್ ಇನ್ನಿತರ ಸಲಕರಣೆಗಳನ್ನು ಉಚಿತವಾಗಿ ನೀಡಲಾಗುತ್ತಿದೆ.

**ಅ. ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ :**

ಎಸ್.ಎಸ್.ಎಲ್.ಸಿ ನಂತರ ವ್ಯಾಸಂಗ ಮಾಡುವ ದೃಷ್ಟಿದೋಷವುಳ್ಳ ವಿಕಲಚೇತನ ವಿದ್ಯಾರ್ಥಿಗಳು ಇತ್ತೀಚಿನ ತಂತ್ರಜ್ಞಾನ ಮತ್ತು ತಂತ್ರಾಂಶದ ಉಪಯೋಗದಿಂದ ಉನ್ನತ ಶಿಕ್ಷಣವನ್ನು ಪಡೆಯಲು ಅನುಕೂಲವಾಗುವಂತೆ ಮಾತನಾಡುವ (ಟಾಕಿಂಗ್) ಲ್ಯಾಪ್‌ಟಾಪ್‌ಗಳನ್ನು ಅರ್ಹ ಫಲಾನುಭವಿಗಳಿಗೆ ನೀಡಲಾಗುತ್ತಿದೆ.

**ತೀವ್ರತರೆನಾದ ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರವಾಹನ ಯೋಜನೆ :**

20 ರಿಂದ 60 ವರ್ಷದ ವಯೋಮಾನದ ತೀವ್ರತರವಾದ ದೈಹಿಕ ವಿಕಲಚೇತನರಿಗೆ ಓಡಾಡಲು ಅನುಕೂಲವಾಗುವಂತೆ ಜೀವಿತ ಕಾಲದಲ್ಲಿ ಒಂದು ಬಾರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನವನ್ನು ಮಂಜೂರು ಮಾಡಲಾಗುತ್ತದೆ. ಈ ಯೋಜನೆಯಡಿ ಫಲಾನುಭವಿಯ ಕುಟುಂಬದ ವಾರ್ಷಿಕ ವರಮಾನ ರೂ.2.00 ಲಕ್ಷಗಳಿಗಿಂತ ಕಡಿಮೆ ಇರಬೇಕಾಗಿರುತ್ತದೆ.

**2.ಜಿಲ್ಲಾ ಅಂಗವಿಕಲರ ಪುನರ್ವಸತಿ ಕೇಂದ್ರ ಯೋಜನೆ:-**

ವಿಕಲಚೇತನರನ್ನು ಗುರುತಿಸಿ ಅವರಿಗೆ ಶೈಕ್ಷಣಿಕ, ಉದ್ಯೋಗ ಮತ್ತು ತರಬೇತಿ, ಸಾಮಾಜಿಕ ಭದ್ರತೆ ಹಾಗೂ ಪುನರ್ವಸತಿ ಸೇವೆಗಳನ್ನು ಅವರ ಮನೆ ಬಾಗಿಲಿನಲ್ಲಿಯೇ ಒದಗಿಸಿ ಅವರ ಸರ್ವಾಂಗೀಣ ಪುನರ್ವಸತಿಯನ್ನು ಕಲ್ಪಿಸುವುದು ಈ ಯೋಜನೆಯ ಪ್ರಮುಖ ಉದ್ದೇಶವಾಗಿದೆ.ಈ ಯೋಜನೆಯಡಿ ವಿಕಲಚೇತನರಿಗೆ ಅಗತ್ಯವಿರುವ ವೈದ್ಯಕೀಯ ಸೇವೆ, ವೃತ್ತಿ ಚಿಕಿತ್ಸೆ, ವಿವಿಧ ರೀತಿಯ ಸಾಧನ ಸಲಕರಣೆಗಳನ್ನು ಕೇಂದ್ರಗಳಲ್ಲಿ ತಯಾರಿಸಿ ಒದಗಿಸಲಾಗುವುದು. ಪ್ರಸ್ತುತ 16 ಜಿಲ್ಲೆಗಳಲ್ಲಿ ಜಿಲ್ಲಾ ಪುನರ್ವಸತಿ ಕೇಂದ್ರಗಳು ನಡೆಯುತ್ತಿವೆ. (ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಬೆಳಗಾವಿ, ಬೀದರ್, ಚಿತ್ರದುರ್ಗ, ದಕ್ಷಿಣ ಕನ್ನಡ, ಮೈಸೂರು, ಉಡುಪಿ, ಹಾಸನ, ವಿಜಯಪುರ, ರಾಯಚೂರು, ಚಿಕ್ಕಮಗಳೂರು, ಬಳ್ಳಾರಿ, ಹಾವೇರಿ, ಚಾಮರಾಜನಗರ, ಗದಗ)

**3. ಅಂಗವಿಕಲತೆಯನ್ನು ನಿವಾರಿಸುವ ಶಸ್ತ್ರಚಿಕಿತ್ಸೆಗಾಗಿ ವೈದ್ಯಕೀಯ ಪರಿಹಾರ ನಿಧಿ ಯೋಜನೆ:-**

ಅಂಗವಿಕಲ ವ್ಯಕ್ತಿಗಳಿಗೆ ಅಂಗವಿಕಲತೆಯನ್ನು ನಿವಾರಿಸಲು ಶಸ್ತ್ರ ಚಿಕಿತ್ಸೆಗಾಗಿ ಸರ್ಕಾರಿ ಆಸ್ಪತ್ರೆ, ಸಂಜಯಗಾಂಧಿ ಆಸ್ಪತ್ರೆಗಳಲ್ಲಿ ಹಾಗೂ ಸುಸಜ್ಜಿತ ಖಾಸಗಿ ಆಸ್ಪತ್ರೆಗಳಲ್ಲಿ ಅಂಗವಿಕಲತೆ ನಿವಾರಣಾ ಶಸ್ತ್ರ ಚಿಕಿತ್ಸೆಗಾಗಿ ರೂ.1.00 ಲಕ್ಷಗಳವರೆಗೆ ಸಹಾಯ ಧನವನ್ನು ಮಂಜೂರು ಮಾಡಲಾಗುತ್ತಿದೆ.

**4. ಸಾಧನೆ ಮತ್ತು ಪ್ರತಿಭೆ ಯೋಜನೆ:**

ವಿಕಲಚೇತನ ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡಲು "ಸಾಧನೆ" ಎಂಬ ಯೋಜನೆಯು ಜಾರಿಯಲ್ಲಿದ್ದು, ಕ್ರೀಡೆಗಳಲ್ಲಿ ವಿಶೇಷ ಸಾಧನೆಗೈದ ವಿಕಲಚೇತನರಿಗೆ ರೂ.50,000/-ಗಳ ಧನ ಸಹಾಯವನ್ನು ನೀಡಲಾಗುತ್ತಿದೆ.

ವಿಕಲಚೇತನರು ನೀಡುವ ಸಾಂಸ್ಕೃತಿಕ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡುವ ಸಲುವಾಗಿ "ಪ್ರತಿಭೆ" ಎಂಬ ಯೋಜನೆಯು ಜಾರಿಯಲ್ಲಿದ್ದು, ವೈಯಕ್ತಿಕ ಸಾಂಸ್ಕೃತಿಕ ರೂ.2,000/-ಗಳು ಹಾಗೂ ಸಮೂಹ ಕಾರ್ಯಕ್ರಮಕ್ಕೆ ರೂ.10,000/-ಗಳ ಪ್ರೋತ್ಸಾಹಧನ ನೀಡಲಾಗುತ್ತದೆ.

**5. ನಿರಾಮಯ ಆರೋಗ್ಯ ವಿಮಾ ಯೋಜನೆ :**

ಬುದ್ದಿಮಾಂದ್ಯ, ಸೆರಬ್ರಲ್ ಪಾಲ್ಸಿ, ಆಟಿಸಂ ಮತ್ತು ಬಹುವಿಧ ಅಂಗವಿಕಲತೆ ಹೊಂದಿರುವ ಪ್ರತಿ ವ್ಯಕ್ತಿ ಹಾಗೂ ಮಗುವಿಗೆ ವರ್ಷಕ್ಕೆ ಒಂದು ಬಾರಿ ಪ್ರೀಮಿಯಂ ಮೊತ್ತ ರೂ.250/-ಗಳನ್ನು ಭಾರತ ಸರ್ಕಾರದಿಂದ ಗುರುತಿಸಲ್ಪಟ್ಟ ಅಧಿಕೃತ ಸಂಸ್ಥೆಯಾದ ಅಂಗವಿಕಲರ ಪುನಶ್ಚೇತನ ಸಂಸ್ಥೆ (ರಿ) (ಎ.ಪಿ.ಡಿ) ಬೆಂಗಳೂರು ರವರಿಗೆ ಪಾವತಿಸಲಾಗುವುದು. ಪ್ರತಿ ವರ್ಷ ಯೋಜನೆಯಡಿ ಬರುವ ಫಲಾನುಭವಿಗಳು ರೂ.1.00 ಲಕ್ಷಗಳವರೆಗೆ ವೈದ್ಯಕೀಯ ಸೌಲಭ್ಯ ಪಡೆಯಬಹುದಾಗಿರುತ್ತದೆ. ಈ ಮೊತ್ತದಲ್ಲಿ ರೂ.60,000/-ಗಳವರೆಗೆ ಸರ್ಜರಿ ವೆಚ್ಚ ಉಳಿದ ರೂ.40,000/-ಗಳಲ್ಲಿ ವೈದ್ಯಕೀಯ ಖರ್ಚು ಥೆರಪಿ, ಪ್ರಯಾಣ ವೆಚ್ಚಗಳನ್ನು ಒಳಗೊಂಡಿರುತ್ತದೆ.

7. ಸ್ಪರ್ಧಾ ಚೇತನ:-

ಈ ಯೋಜನೆಯಡಿ ವಿಶೇಷ ಸಾಮರ್ಥ್ಯ/ಭಿನ್ನ ಸಾಮರ್ಥ್ಯದ ವಿದ್ಯಾವಂತ ವ್ಯಕ್ತಿಗೆಗಳಿಗೆ ಐ.ಎ.ಎಸ್./ಕೆ.ಎ.ಎಸ್. ಹಾಗೂ ಇತರೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸರ್ಕಾರದ ಇತರೆ ಇಲಾಖೆಗಳಡಿ ಗುರುತಿಸಲ್ಪಟ್ಟ ಪೂರ್ವ ಪರೀಕ್ಷಾ ತರಬೇತಿ ಕೇಂದ್ರಗಳು ಹಾಗೂ ಈ ಇಲಾಖೆಯಿಂದ ಗುರುತಿಸಲ್ಪಟ್ಟ ತರಬೇತಿ ಕೇಂದ್ರಗಳ ಮೂಲಕ ತರಬೇತಿಯನ್ನು ಉಚಿತವಾಗಿ ನೀಡಲಾಗುತ್ತಿದೆ.

8. ನಿರುದ್ಯೋಗ ಭತ್ಯೆ:- ಎಸ್.ಎಸ್.ಎಲ್.ಸಿ ಹಾಗೂ ನಂತರ ವ್ಯಾಸಂಗ ಮಾಡಿರುವ ನಿರುದ್ಯೋಗಿ ವಿಕಲಚೇತನರಿಗೆ ಮಾಸಿಕ ರೂ.1000/-ಗಳ ನಿರುದ್ಯೋಗ ಭತ್ಯೆಯನ್ನು ಮಂಜೂರು ಮಾಡಲಾಗುತ್ತಿದೆ.

(ಇ) ಸಾರ್ವಜನಿಕ ಅರಿವು ಮೂಡಿಸುವ ಯೋಜನೆಗಳು:

1. ವಿಕಲಚೇತನರ ಮಾಹಿತಿ ಸಲಹಾ ಕೇಂದ್ರ :

ಅಂಗವಿಕಲರಿಗೆ ಲಭ್ಯವಿರುವ ರಾಜ್ಯ ಸರ್ಕಾರದ ಹಾಗೂ ಕೇಂದ್ರ ಸರ್ಕಾರದ ಯೋಜನೆಗಳ ಹಾಗೂ ವಿಶೇಷ ಶಾಲೆಗಳು ಹಾಗೂ ವೃತ್ತಿ ತರಬೇತಿ ಸಂಸ್ಥೆಗಳ ಬಗ್ಗೆ ಮಾಹಿತಿಯನ್ನು ಒದಗಿಸಲು ನಿರ್ದೇಶನಾಲಯದಲ್ಲಿ ಹಾಗೂ ರಾಜ್ಯದ 30 ಜಿಲ್ಲೆಗಳಲ್ಲಿ ವಿಕಲಚೇತನರ ಸಹಾಯವಾಣಿ / ಮಾಹಿತಿ ಕೇಂದ್ರಗಳನ್ನು ನಡೆಸಲಾಗುತ್ತಿದೆ.ಈ ಕೇಂದ್ರಗಳಲ್ಲಿ ಒಳ್ಳೆಯ ಗುಣ ಮಟ್ಟದ ಕೃತಕಾಂಗಗಳು ದೊರೆಯುವ ಮಾಹಿತಿ ಹಾಗೂ ಅಂಗವಿಕಲರಿಗೆ ಬೇಕಾಗಿರುವ ಮಾಹಿತಿಗಳನ್ನು ಮತ್ತು ಇದರ ಜೊತೆಗೆ ರಾಜ್ಯ ಸರ್ಕಾರ, ಕೇಂದ್ರ ಸರ್ಕಾರ, ಸಾರ್ವಜನಿಕ ಉದ್ಯಮ ಹಾಗೂ ಖಾಸಗಿ ಉದ್ಯಮಗಳಲ್ಲಿ ಅಂಗವಿಕಲರಿಗೆ ಉದ್ಯೋಗ ಅವಕಾಶಗಳ ಬಗ್ಗೆ ಮಾಹಿತಿಯನ್ನು ನೀಡಲಾಗುವುದು.

2) ವಿಕಲಚೇತನರಿಗೆ ಗುರುತಿನ ಚೀಟಿ ನೀಡುವ ಯೋಜನೆ:-

ಈ ಯೋಜನೆಯಡಿಯಲ್ಲಿ ವಿಕಲಚೇತನ ವ್ಯಕ್ತಿಗಳಿಗೆ ಗುರುತಿನ ಚೀಟಿಗಳನ್ನು ನೀಡಲಾಗುತ್ತಿದೆ.ಈ ಗುರುತಿನ ಚೀಟಿಯನ್ನು ವಿವಿಧ ಸರ್ಕಾರಿ ಸೌಲಭ್ಯಗಳನ್ನು ಪಡೆಯಲು ಉಪಯೋಗಿಸಿಕೊಳ್ಳಬಹುದಾಗಿದೆ. ವಿಕಲಚೇತನರಿಗೆ ವಿಶಿಷ್ಟ ಗುರುತಿನ ಚೀಟಿ (UNIQUE DISABILITY ID)ನೀಡುವ ಯೋಜನೆಯು ಕೇಂದ್ರ ಸರ್ಕಾರ ಪ್ರಾಯೋಜಿತ ಯೋಜನೆಯಾಗಿದೆ. ರಾಜ್ಯ ಸರ್ಕಾರದಿಂದ ನೇಮಿಸಲಾಗುವ ವೈದ್ಯಕೀಯ ಪ್ರಾಧಿಕಾರಗಳಿಂದ ದೃಢೀಕರಿಸಲಾಗುವ ವೈದ್ಯಕೀಯ ಪ್ರಮಾಣ ಪತ್ರದ ಸಮಗ್ರ ಮಾಹಿತಿಯುಳ್ಳ ಗಣಕೀಕೃತ ಗುರುತಿನ ಚೀಟಿಯನ್ನು ವಿಕಲಚೇತನ ವ್ಯಕ್ತಿಗಳಿಗೆ ನೀಡುವ ವ್ಯವಸ್ಥೆಯಾಗಿದ್ದು, ಇದರಲ್ಲಿ ವಿಕಲಚೇತನ ವ್ಯಕ್ತಿಯ ವಿವರಗಳು ಹಾಗೂ ಅವರಲ್ಲಿರುವ ವಿಕಲತೆಯ ವಿವರ ಮತ್ತು ಪ್ರಮಾಣವನ್ನು ನಮೂದಿಸಲಾಗಿರುತ್ತದೆ.

3).ವಿಕಲಚೇತನರಿಗೆ ರಿಯಾಯಿತಿ ದರದ ಬಸ್ ಪಾಸ್:

ಈ ಯೋಜನೆಯಡಿ ವಿಕಲಚೇತನರಿಗೆ 100 ಕಿ.ಮೀ. ವ್ಯಾಪ್ತಿಯೊಳಗೆ ಸಂಚರಿಸಲು ವಾರ್ಷಿಕ ರೂ.660/- ರಿಯಾಯಿತಿ ದರದಲ್ಲಿ ಬಸ್ ಪಾಸ್‌ಗಳನ್ನು ಕೆ.ಎಸ್.ಆರ್.ಟಿ.ಸಿ ಹಾಗೂ ಬಿ.ಎಂ.ಟಿ.ಸಿ ವತಿಯಿಂದ ವಿತರಿಸಲಾಗುತ್ತಿದೆ ಪೂರ್ಣ ಅಂಧರು ಉಚಿತವಾಗಿ ರಾಜ್ಯದಲ್ಲಿ ಸಂಚರಿಸಲು ಅವಕಾಶವಿರುತ್ತದೆ.

# ಅನುಬಂಧ-02

## ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ,

## ಜಿಲ್ಲಾ ಕಚೇರಿ, ಕೋಲಾರ ಜಿಲ್ಲೆ.

| ಕ್ರ. ಸಂ. | ಯೋಜನೆಗಳ ವಿವರ | 2017-18 | | 2018-19 | | 2019-20 | |
|---|---|---|---|---|---|---|---|
| | | ಬಿಡುಗಡೆ | ವೆಚ್ಚ | ಬಿಡುಗಡೆ | ವೆಚ್ಚ | ಬಿಡುಗಡೆ | ವೆಚ್ಚ |
| 1 | ವಿದ್ಯಾರ್ಥಿವೇತನ | 11.20 | 9.89 | 11.20 | 9.89 | 19.55 | 17.41 |
| 2 | ಸಾಧನ ಸಲಕರಣೆ (ಇತರೆ) | 3.66 | – | 3.66 | 0.00 | 9.50 | 3.20 |
| 3 | ಯಂತ್ರಚಾಲಿತ ದ್ವಿಚಕ್ರವಾಹನ | – | – | – | – | – | – |
| 4 | ಟಾಕಿಂಗ್ ಲ್ಯಾಪ್‌ಟಾಪ್ | – | – | – | – | – | – |
| 5 | ಗ್ರಾಮಿಣ ಪುನರ್ವಸತಿ ಕೇಂದ್ರ | 48.50 | 48.21 | 48.50 | 48.21 | 47.00 | 41.76 |
| 6 | ಆಧಾರ | 10.50 | 10.50 | 10.50 | 10.50 | 7.00 | 0.00 |
| 7 | ಸಾಧನೆ/ಪ್ರತಿಭೆ | – | – | – | – | 2.70 | 1.00 |
| 8 | ವೈದ್ಯಕೀಯ ಪರಿಹಾರ ನಿಧಿ | 3.00 | – | 3.00 | – | 2.50 | 1.90 |
| 9 | ಶುಲ್ಕ ಮರುಪಾವತಿ | 1.28 | 0.68 | 1.28 | 0.68 | 2.40 | 1.81 |
| 10 | ವಿವಾಹ ಪ್ರೋತ್ಸಾಹ ಧನ | 8.00 | 5.50 | 8.00 | 8.00 | 8.50 | 8.00 |
| 11 | ಶಿಶು ಪಾಲನಾ ಭತ್ಯೆ | 1.08 | 0.46 | 1.08 | 0.46 | 2.25 | 0.90 |
| 12 | ವಿಕಲಚೇತನರ ಸಹಾಯವಾಣಿ ಕೇಂದ್ರ | 4.13 | 3.68 | 4.13 | 3.68 | 6.68 | 4.62 |
| 13 | ಶಿಶು ಕೇಂದ್ರೀಕೃತ | 154.99 | 154.99 | 154.99 | 154.99 | 190.97 | 190.97 |
| 14 | ಮಹಿಳಾ ವಸತಿನಿಲಯ (ಯೋಜನೆ) | 12.90 | 12.90 | 12.90 | 12.90 | 13.30 | 13.30 |
| 15 | ವಿಶ್ವ ವಿಕಲಚೇತನರ ದಿನಾಚರಣೆ | 0.50 | 0.50 | 0.50 | 0.50 | 0.60 | 0.00 |
| 16 | ಸಾರ್ವಜನಿಕ ಅರಿವು ಮೂಡಿಸುವ ಕಾರ್ಯಕ್ರಮ (ಅರಿವಿನ ಸಿಂಚನ) | 2.88 | 1.92 | 2.88 | 1.92 | 0.00 | 0.00 |
| 17 | ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ | 6.15 | 6.15 | 6.15 | 6.15 | 3.02 | 3.02 |
| 18 | ವಿಶ್ವ ಹಿರಿಯ ನಾಗರಿಕರ ದಿನಾಚರಣೆ | 0.60 | 0.60 | 0.60 | 0.60 | 0.60 | 0.24 |
| 19 | ವೃದ್ಧಾಶ್ರಮ (ಜಿಲ್ಲಾ ವಲಯ ಯೋಜನೆ) | 8.00 | 8.00 | 8.00 | 8.00 | 8.00 | 8.00 |
| 20 | ಮರಣ ಪರಿಹಾರ ನಿಧಿ | 0.50 | 0.50 | 0.50 | 0.50 | 0.00 | 0.00 |
| | ಒಟ್ಟು | 267.37 | 264.48 | 277.87 | 266.98 | 324.57 | 296.13 |